## ನಿತ್ಯ ಪಂಚಾಂಗ

ಮಾಸ: ಜ್ಯೇಷ್ಠ । ಸಂವತ್ಸರ: ಕ್ರೋಧಿ

**02-07-2024 – ಮಂಗಳವಾರ**

| | |
|---|---|
| ತಿಥಿ | : ಏಕಾದಶಿ |
| ಪಕ್ಷ | : ಕೃಷ್ಣ |
| ನಕ್ಷತ್ರ | : ಕೃತಿಕಾ |
| ಯೋಗ | : ಧೃತಿ |
| ಕರಣ | : ಬಾಳವ |
| ಸೂರ್ಯೋದಯ | : 05:46:29 |
| ಸೂರ್ಯಾಸ್ತ | : 19:15:38 |
| ರಾಹು | : 15:53-17:35 |
| ಯಮಘಂಡ | : 09:09-10:50 |
| ಗುಳಿಕ | : 12:31-14:12 |

## ತುಂಗಭದ್ರಾ ನೀರಿನ ಮಟ್ಟ



**ಸೋಮವಾರ : 01-07-2024**

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1584.15 ಅಡಿ |
| ಒಳ ಹರಿವು | 11854 ಕ್ಯುಸೆಕ್ |
| ಹೊರ ಹರಿವು | 296 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 6.782 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| **ಕಳೆದ ವರ್ಷ ಇದೇ ದಿನ** | |
| ಇಂದಿನ ಮಟ್ಟ | 1576.75 ಅಡಿ |
| ಒಳ ಹರಿವು | 134 ಕ್ಯುಸೆಕ್ |
| ಹೊರ ಹರಿವು | 2427 ಕ್ಯುಸೆಕ್ |
| ಸಾಮರ್ಥ್ಯ | 3.092 ಟಿಎಂಸಿ |

# ಹವಮಾನ ಆಧಾರಿತ ಬೆಳೆ ವಿಮಾ ಯೋಜನೆ: ರೈತರು ನೋಂದಾಯಿಸಿ

**ಹಂಪಿ ಟೈಮ್ಸ್ ಹೊಸಪೇಟೆ**

2024-25 ನೇ ಸಾಲಿನ ತೋಟಗಾರಿಕೆ ಇಲಾಖೆಯಿಂದ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ ಅಡಿಯಲ್ಲಿ ಬೆಳೆ ವಿಮೆಗೆ ನೋಂದಾಯಿಸಲು ರೈತರಿಗೆ ಅವಕಾಶ ಕಲ್ಪಿಸಲಾಗಿದೆ.

ಮುಂಗಾರು ಹಂಗಾಮಿನಲ್ಲಿ ಮರುವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ ಅನುಷ್ಠಾನಗೊಳಿಸಲು ಅಗ್ರಿಕಲ್ಚರ್ ಇನ್ಸುರೆನ್ಸ್ ಕಂಪನಿ (ಎಐಸಿ) ರವರನ್ನು ವಿಜಯನಗರ ಜಿಲ್ಲೆಗೆ ಆಯ್ಕೆ ಮಾಡಲಾಗಿದೆ. ಹೂವಿನಹಡಗಲಿ, ಹಗರಿಬೊಮ್ಮನಹಳ್ಳಿ, ಹೊಸಪೇಟೆ, ಕೊಟ್ಟೂರು, ಕೂಡ್ಲಿಗಿ ತಾಲೂಕಿನಲ್ಲಿ ದಾಳಿಂಬೆ ಹಾಗೂ ಹಸಿ ಮೆಣಸಿನಕಾಯಿ ಬೆಳೆದ ರೈತರು ಹಾಗೂ ಹರಪನಹಳ್ಳಿ ತಾಲೂಕಿನಲ್ಲಿ ದಾಳಿಂಬೆ ಹಾಗೂ ಅಡಿಕೆ ಬೆಳೆದ ರೈತರು ಜುಲೈ 31ರೊಳಗೆ ತಮ್ಮ ಬೆಳೆಗಳಿಗೆ ಈ ಯೋಜನೆಯಡಿ ಬೆಳೆವಿಮೆಗೆ ನೋಂದಾಯಿಸಿಕೊಳ್ಳಬಹುದಾಗಿದೆ.

ಸಾಮಾನ್ಯ ವಿಮೆ ಪ್ರತಿ ಹೆಕ್ಟರ್‌ಗೆ ದಾಳಿಂಬೆ ಬೆಳೆಗೆ 1,27,000, ಹಸಿ ಮೆಣಸಿನಕಾಯಿ ಬೆಳೆಗೆ 71,000 ಹಾಗೂ ಅಡಿಕೆ ಬೆಳೆಗೆ 1,28,000 ವಿಮಾ ಮೊತ್ತ ಇರುತ್ತದೆ. ರೈತರು ದಾಳಿಂಬೆ ಬೆಳೆಗೆ 6,350 ರೂ., ಹಸಿ ಮೆಣಸಿನಕಾಯಿ ಬೆಳೆಗೆ 3,550 ರೂ., ಅಡಿಕೆ ಬೆಳೆಗೆ 6,400 ರೂ., ವಿಮಾ (ಶೇ.5 ರಂತೆ) ಕಂತು ಪಾವತಿಸಬೇಕಾಗುತ್ತದೆ.

ಬೆಳೆ ವಿಮಾ ಮೊತ್ತವು ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ಒಂದೇ ಆಗಿರುತ್ತದೆ. ಬೆಳೆ ವಿಮಾ ಮೊತ್ತವನ್ನು ಪಾವತಿಸಲು ಹತ್ತಿರದ ರಾಷ್ಟ್ರೀಕೃತ ಬ್ಯಾಂಕ್ ಶಾಖೆಗಳಲ್ಲಿ, ಸಹಕಾರಿ ಸಂಘಗಳನ್ನು ಮತ್ತು ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಸಂಪರ್ಕಿಸಿ ಮಾಹಿತಿಯನ್ನು ಪಡೆಯಬಹುದು.

ದಾಖಲಾತಿಗಳ ವಿವರ: ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಖಾತೆ ಪುಸ್ತಕ, ಬ್ಯಾಂಕ್ ಪಾಸ್ ಪುಸ್ತಕ, ಆಧಾರ್ ಸಂಖ್ಯೆ ಹಾಗೂ ಸ್ವಯಂ ಘೋಷಿತ ಬೆಳೆ ವಿವರಗಳನ್ನು ನೀಡತಕ್ಕದ್ದು. ಹೆಚ್ಚಿನ ಮಾಹಿತಿಗೆ ಸಮೀಪದ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳು ಹಾಗೂ ಕೃಷಿ ಅಧಿಕಾರಿಗಳು, ಕಂದಾಯ ಇಲಾಖೆಯ ಸಿಬ್ಬಂದಿ ಹಾಗೂ ಹತ್ತಿರದ ಬ್ಯಾಂಕ್ ಶಾಖೆಗಳನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಮೆದುಳು ಜ್ವರ ತಡೆಗೆ ಮುನ್ನೆಚ್ಚರಿಕೆ ಅಗತ್ಯ

**ಹಂಪಿ ಟೈಮ್ಸ್ ಬಳ್ಳಾರಿ**

ಮೆದುಳು ಜ್ವರವು ವೈರಾಣುವಿನಿಂದ ಉಂಟಾಗುವ ರೋಗ. ಈ ರೋಗವು ಸೋಂಕಿರುವ ಹಂದಿಗಳಿಂದ ಕ್ಯುಲೆಕ್ಸ್ ಜಾತಿಯ ಸೊಳ್ಳೆಗಳ ಮೂಲಕ ಹರಡುತ್ತದೆ. ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ ಅವರು ತಿಳಿಸಿದ್ದಾರೆ.

ಮೆದುಳು ಜ್ವರ ರೋಗಕ್ಕೆ ಹೆಚ್ಚಾಗಿ ಮಕ್ಕಳು ತುತ್ತಾಗುತ್ತಾರೆ ಹಾಗೂ ಬದುಕಿ ಉಳಿದ ವ್ಯಕ್ತಿಗಳಲ್ಲಿ ಅನೇಕರಿಗೆ ನರ ದೌರ್ಬಲ್ಯ ಬುದ್ಧಿ ಮಾಂದ್ಯತೆ ಮುಂತಾದ ಪರಿಣಾಮಗಳು ಉಂಟಾಗುತ್ತವೆ ಎಂದು ತಿಳಿಸಿದ್ದಾರೆ.

**ರೋಗ ಹರಡುವ ವಿಧಾನ:** ಮೆದುಳು ಜ್ವರದ ವೈರಾಣುಗಳನ್ನು ಹೊಂದಿದ ಹಂದಿ ಮತ್ತು ಬೆಳ್ಳಕ್ಕಿಯನ್ನು ಕಚ್ಚಿದ ಕ್ಯೂಲೆಕ್ಸ್ ಜಾತಿಯ ಸೊಳ್ಳೆಗಳು ಮನುಷ್ಯನಿಗೆ ಕಚ್ಚುವುದರಿಂದ ಈ ರೋಗವು ಹರಡುತ್ತದೆ.

**ರೋಗ ಲಕ್ಷಣಗಳು:** ಜ್ವರ, ತಲೆನೋವು, ಕತ್ತಿನ ಬಿಗಿತ, ತಲೆಸುತ್ತುವಿಕೆ, ಮೈ ನಡುಕ, ಎಚ್ಚರ ತಪ್ಪುವುದು. ಖಾಯಿಲೆಯು ಉಲ್ಬಣಗೊಂಡಾಗ ಮೆದುಳು ಊತಗೊಂಡು ಸಾವು ಸಂಭವಿಸಬಹುದು.

**ರೋಗ ನಿಯಂತ್ರಣ ಮತ್ತು ಮುನ್ನೆಚ್ಚರಿಕಾ ಕ್ರಮಗಳು:** 1 ರಿಂದ 15 ವರ್ಷ ವಯಸ್ಸಿನ ಮಕ್ಕಳಿಗೆ 2ಬಾರಿ ಜೆಇ ಲಸಿಕೆ ಕೊಡಿಸಬೇಕು. ರೋಗ ಲಕ್ಷಣಗಳು ಕಂಡುಬಂದಲ್ಲಿ ತಡ ಮಾಡದೇ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರ ಅಥವಾ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಸೂಕ್ತ ಚಿಕಿತ್ಸೆ ನೀಡಬೇಕು. ಹಂದಿಗಳನ್ನು ಜನರ ವಾಸ ಸ್ಥಳದಿಂದ ಕನಿಷ್ಟ ಪಕ್ಷ 3 ಕಿ.ಮೀ ದೂರಕ್ಕೆ ಸ್ಥಳಾಂತರಿಸಬೇಕು. ಹಂದಿ ಗೂಡುಗಳಿಗೆ ಸೊಳ್ಳೆ ನಿರೋಧಕ ಜಾಲರಿಗಳನ್ನು ಅಳವಡಿಸಬೇಕು ಮತ್ತು ಕೀಟನಾಶಕ ಸಿಂಪಡಿಸಬೇಕು.



ಸಂಜೆ ವೇಳೆಯಲ್ಲಿ ಮಕ್ಕಳು ಮೈ ತುಂಬಾ ಬಟ್ಟೆ ಧರಿಸಿ ಓಡಾಡಬೇಕು. ಮಲಗುವಾಗ ತಪ್ಪದೇ ಸೊಳ್ಳೆ ಪರದೆಗಳನ್ನು ಉಪಯೋಗಿಸಬೇಕು. ಬೇವಿನ ಮಿಶ್ರಣದ ಗೊಬ್ಬರವನ್ನು ಭತ್ತದ ಗದ್ದೆಗಳಲ್ಲಿ ಬಳಸುವುದರಿಂದ ಸೊಳ್ಳೆಗಳು ಉತ್ಪತ್ತಿಯಾಗುವುದನ್ನು ತಡೆಗಟ್ಟಬಹುದು. ನೀರು ನಿಂತ ಸ್ಥಳಗಳಲ್ಲಿ (ಕೆರೆ, ಭಾವಿ, ಹೊಂಡ ಇತ್ಯಾದಿ) ಲಾರ್ವಹಾರಿ ಮೀನುಗಳನ್ನು ಬಿಡಬಹುದು.

**ಮೆದುಳು ಜ್ವರ ಸಮೀಕ್ಷೆ:** ಸಂಶಯಾತ್ಮಕ ಮೆದುಳು ಜ್ವರ (ತೀವ್ರವಾದ ಎನ್ಸೆಫಾಲಿಟಿಸ್ ಸಿಂಡ್ರೋಮ್) ಮತ್ತು ಅರಿವಳಿಕೆ ಪ್ರಕರಣಗಳನ್ನು ಇಂಟಿಗ್ರೇಟೆಡ್ ಡಿಸೀಸ್ ಸರ್ವಲೆನ್ಸ್ ಪ್ರೋಗ್ರಾಂನ ಈಂಡಿಟ:ಖ ನಲ್ಲಿ ದಾಖಲಿಸಿ, ಇಂತಹ ಪ್ರಕರಣಗಳನ್ನು ತುರ್ತು ಚಿಕಿತ್ಸೆಗಾಗಿ ಹತ್ತಿರದ ಆರೋಗ್ಯ ಕೇಂದ್ರ ಅಥವಾ ತಜ್ಞರು ಇರುವ ಆಸ್ಪತ್ರೆಗೆ ಕೂಡಲೇ ಕಳುಹಿಸಿಕೊಡಲಾಗುತ್ತದೆ.

ಖಚಿತ ಪ್ರಕರಣ ವರದಿಯಾದಾಗ ಪ್ರಮಾಣದ ವರದಿ ಅನುಸಾರ ಆ ಹಳ್ಳಿಯ ಸುತ್ತ-ಮುತ್ತ ಪ್ರದೇಶದಲ್ಲಿ ಯಾವುದೇ ಸಂಶಯಾಸ್ಪದ ಪ್ರಕರಣಗಳಿಗೋಸ್ಕರ ಸಮೀಕ್ಷೆ ನಡೆಸಲಾಗುತ್ತದೆ. ಇದಲ್ಲದೆ ಹಂದಿಗಳ ಸಮೀಕ್ಷೆ ಮತ್ತು ಸೊಳ್ಳೆಗಳ ಸಮೀಕ್ಷೆಯನ್ನೂ ಮಾಡಲಾಗುತ್ತದೆ. ಖಚಿತ ಪ್ರಕರಣಗಳು ಪತ್ತೆಯಾದಾಗ ಆ ಪ್ರದೇಶದ ಎಲ್ಲಾ ಮನೆಗಳಿಗೆ ಒಂದು ಸುತ್ತು ಒಳಾಂಗಣ ಕೀಟನಾಶಕ ಸಿಂಪಡಣೆ ಹಾಗೂ ನಾಲ್ಕು ಸುತ್ತು ಹೊರಾಂಗಣದಲ್ಲಿ ಧೂಮೀಕರಣ ಮಾಡಲಾಗುತ್ತದೆ. ಗ್ರಾಮ ಪಂಚಾಯಿತಿ ಸಹಯೋಗದೊಂದಿಗೆ ಒಂದು ವಾರದ ಅಂತರದಲ್ಲಿ 4 ಬಾರಿ ನಡೆಸಲಾಗುತ್ತದೆ. ಹಾಗಾಗಿ ಸಾರ್ವಜನಿಕರು ಮುಂಜಾಗ್ರತೆ ಕ್ರಮ ವಹಿಸಬೇಕು ಎಂದು ಜಿಲ್ಲಾ ವಿಬಿಡಿಸಿ ಅಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ತಿಳಿಸಿದ್ದಾರೆ.

# ಪತ್ರಿಕೆಗಳು ಆಡಳಿತದ ಕಣ್ಣು ಕಿವಿ

ಮೊದಲ ಪುಟದಿಂದ

ಒಳಿತನ್ನೇ ಕೊಡಬೇಕು. ಸರ್ಕಾರವನ್ನೇ ಬುಡಮೇಲು ಮಾಡುವ ಶಕ್ತಿ ಲೇಖನಿಗಿದೆ. ಲೇಖನಿಯ ಶಕ್ತಿ ಸಮಾಜದ ಜನರ ಬದುಕಿನ ಮೇಲೆ ಬೆಳಕು ಚೆಲ್ಲುವಂತಿರಲಿ ಎಂದರು.

ಹುಡಾ ಅಧ್ಯಕ್ಷ ಎಚ್.ಎನ್ ಮಹಮ್ಮದ್ ಇಮಾಮ್ ನಿಯಾಜಿ ಮಾತನಾಡಿ, ಪತ್ರಕರ್ತರಿಗೆ ನಿವೇಶನಕ್ಕಾಗಿ ಜಿಲ್ಲಾಡಳಿತ ಜಾಗ ಮಂಜೂರು ಮಾಡಿದರೆ ಹುಡಾದಿಂದ ಅಭಿವೃದ್ಧಿ ಮಾಡಿಕೊಡುವೆ ಎಂದರು.

ಕಾನಿಪ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಲಕ್ಷ್ಮಣ, ರಾಜ್ಯ ಸಮಿತಿ ಸದಸ್ಯ ಪಿ.ವೆಂಕೋಬನಾಯಕ ಮತ್ತು ಜಿಲ್ಲಾಧ್ಯಕ್ಷ ಪಿ.ಸತ್ಯನಾರಾಯಣ ಮಾತನಾಡಿ, ಪತ್ರಕಾ ಭವನ ನಿರ್ಮಾಣ, ಪತ್ರಕರ್ತರಿಗೆ ನಿವೇಶನ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಮನವಿ ಮಾಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಗವಿಸಿದ್ದಪ್ಪ ಹೊಸಮನೆ ಮಾತನಾಡಿ, ವಾರ್ತಾ ಇಲಾಖೆಗೆ ಹೊಸಪೇಟೆ ಪತ್ರಕರ್ತರ ಕೊಡುಗೆ ಅಪಾರವಾಗಿದೆ. ಕಳೆದ 25 ವರ್ಷಗಳಿಂದಲೂ ವಾರ್ತಾ ಇಲಾಖೆಯನ್ನು ನಿರಂತರವಾಗಿ ಉಳಿಸಿಕೊಂಡು ಬಂದಿದ್ದಾರೆ. ವಾರ್ತಾ ಇಲಾಖೆ ಜಾಗ ಉಳಿಸಿ ವಾರ್ತಾ ಭವನ ನಿರ್ಮಾಣ ಕಾರ್ಯದಲ್ಲೂ ಇವರ ಸಹಕಾರ ಮಹತ್ತರವಾದುದು ಎಂದರು.

ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷ ಜೆ.ಎಂ. ಶಿವಪ್ರಸಾದ್ ಅವರು ಪತ್ರಕರ್ತರಿಗೆ ಆರೋಗ್ಯ ವಿಮೆ ಕಾರ್ಡ್‌ಗಳನ್ನು ವಿತರಿಸಿದರು.

ಹಿರಿಯ ಪತ್ರಕರ್ತರಾದ ಮಾಧವರಾವ್, ಉಜ್ಜಯಿನಿ ರುದ್ರಪ್ಪ, ಭೀಮಣ್ಣ ಗಜಾಪುರ, ಬುಡ್ಡಿ ಬಸವರಾಜ, ಕೆ.ಉಮಾಪತಿ, ಅಶ್ವತ್ಥ ನಾರಾಯಣ ಮತ್ತು ಪ್ರತಿಭಾವಂತ ಮಕ್ಕಳನ್ನು ಸನ್ಮಾನಿಸಲಾಯಿತು. ವಿವಿಧ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ವಿಜಯನಗರ ಜಿಲ್ಲೆ ಹಾಗೂ ಬಳ್ಳಾರಿ ಜಿಲ್ಲೆಯ ಪತ್ರಕರ್ತರು ಇದ್ದರು. ಪತ್ರಕರ್ತರಾದ ಕೃಷ್ಣ ಲಮಾಣಿ, ಜಯಪ್ಪ ರಾಥೋಡ್, ಸುರೇಶ ಚೌವ್ಹಾಣ, ಅನಂತ ಜೋಷಿ ಪೂರ್ಣಿಮ, ರೇಖಾಪ್ರಕಾಶ, ಭೀಮೇಶ ನಿರ್ವಹಿಸಿದರು.

# ಅತ್ಯಾಚಾರ ಎಸಗಿದ ಆರೋಪಿಗೆ ಶಿಕ್ಷೆ

ಮೊದಲ ಪುಟದಿಂದ

ಬಸ್ ಕಂಡಕ್ಟರ ಹತ್ತಿರ ಚಿಲ್ಲರೆ ಇಸಿದುಕೊಳ್ಳುತ್ತಿದ್ದಾಗ ಆರೋಪಿತನು ಬಾಧಿತಳಿಗೆ ಅಪಹರಿಸಿಕೊಂಡು ಮಹಾರಾಷ್ಟ್ರದ ಸತಾರ ನಗರಕ್ಕೆ ಹೋಗಿ ಅಲ್ಲಿ ತನ್ನ ಗೆಳೆಯನು ಕೊಡಿಸಿದ ರೂಮಿನಲ್ಲಿ ಸುಮಾರು 20 ದಿನಗಳವರೆಗೆ ವಾಸವಾಗಿದ್ದು, ಆ ದಿನಗಳಲ್ಲಿ ಸಮಯ ಸಿಕ್ಕಾಗಲೆಲ್ಲ ಬಾಧಿತಳ ಮೇಲೆ ಬಲಾತ್ಕಾರ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಕುಕನೂರು ಪೋಲಿಸರು ದೂರು ಸ್ವೀಕರಿಸಿದ್ದು, ಯಲಬುರ್ಗಾ ಗ್ರಾಮೀಣ ವೃತ್ತದ ಸಿಪಿಐ ರಮೇಶ ರೊಟ್ಟಿ ಅವರು ಈ ಪ್ರಕರಣದ ತನಿಖೆಯನ್ನು ನಿರ್ವಹಿಸಿ ಆರೋಪಿತನ ವಿರುದ್ದ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಈ ಪ್ರಕರಣವು ಸ್ಪೇ.ಎಸ್‌ಸಿ(ಪೋಕ್ಸೊ) ಸಂ:31/2019ರಲ್ಲಿ ದಾಖಲಾಗಿದ್ದು, ವಿಚಾರಣೆಯನ್ನು ನಡೆಸಿದ ನ್ಯಾಯಾಲಯವು ಆರೋಪಿ ಶಫಿಕ ಭೀರಸಾಬ ಮೇಲ್ಗಡೆ ಸಾ: ಮಾಟಲದಿನ್ನಿ ಇತನ ಮೇಲಿನ ಆರೋಪಣೆಗಳು ಸಾಭೀತಾಗಿವೆ ಎಂದು 10 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ. 30,000 ಗಳ ದಂಡವನ್ನು ಭರಿಸುವಂತೆ ಮತ್ತು ದಂಡದ ಮೊತ್ತದಲ್ಲಿ ರೂ. 10,000 ಗಳನ್ನು ಬಾಧಿತಳಿಗೆ ಪರಿಹಾರ ರೂಪದಲ್ಲಿ ನೀಡವಂತೆ ಆದೇಶಿಸಿ, ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ ನ್ಯಾಯಾಧೀಶರಾದ (ಪೋಕ್ಸೊ) ಕುಮಾರ ಡಿ.ಕೆ ಅವರು 2024ರ ಜೂನ್ 24ರಂದು ತೀರ್ಪು ಹೊರಡಿಸಿರುತ್ತಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ಗೌರಮ್ಮ ದೇಸಾಯಿ ಅವರು ಈ ಪ್ರಕರಣ ನಡೆಸಿ ವಾದ ಮಂಡಿಸಿದ್ದರು ಎಂದು ವಿಶೇಷ ಸರ್ಕಾರಿ ಅಭಿಯೋಜನಕರ ಕಚೇರಿ ಪ್ರಕಟಣೆ ತಿಳಿಸಿದೆ.

# ಜುಲೈ 03, 04ರಂದು ಜಿಪಿಎಸ್ ವಿಶೇಷ ಅಭಿಯಾನ

**ಹಂಪಿ ಟೈಮ್ಸ್ ಕೊಪ್ಪಳ**

ವಸತಿ ಯೋಜನೆಯ ಮನೆಗಳಿಗೆ ಗ್ರಾಮ ಪಂಚಾಯತಿಗಳಲ್ಲಿ ಜಿ.ಪಿ.ಎಸ್ ಅಳವಡಿಸುವ ಕುರಿತಂತೆ ಜುಲೈ 03 ಮತ್ತು ಜು.04ರಂದು ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ವಿವಿಧ ವಸತಿ ಯೋಜನೆಯಡಿ ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸಲು ಹಾಗೂ ಅಪೂರ್ಣಗೊಂಡ ಮನೆಗಳ ಪ್ರತಿಯೊಬ್ಬ ಫಲಾನುಭವಿಗೆ ಗ್ರಾಮ ಪಂಚಾಯತಿ ಮಟ್ಟದಲ್ಲಿ ನೋಟಿಸ್ ಜಾರಿ ಮಾಡಿ ಮನೆಗಳನ್ನು ಪೂರ್ಣಗೊಳಿಸಲು ಆಯಾ ತಾಪಂ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ನಿಗಮದಿಂದ ನಿರ್ದೇಶಿಸಲಾಗಿದೆ.

ಇನ್ನೂ ಪ್ರಾರಂಭಿಸದೇ ಇರುವ ಮನೆಗಳು 5069, ತಳಪಾಯ ಹಂತದಲ್ಲಿರುವ 5771, ಲಿಂಟಲ್ ಹಂತದಲ್ಲಿರುವ 4078 ಹಾಗೂ ಛಾವಣಿ ಹಂತದ 1722 ಮನೆಗಳು ಪ್ರಗತಿಯಲ್ಲಿವೆ. ಜಿಲ್ಲೆಯ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿನ ಪ್ರಗತಿಯಲ್ಲಿರುವ ಮನೆಗಳನ್ನು (ಛಾವಣಿ ಮತ್ತು ರೂಫ್) ಹಾಗೂ 2021-22ನೇ ಸಾಲಿನ ಪ್ರಾರಂಭಿಸದೇ ಇರುವ ಮನೆಗಳನ್ನು ಪ್ರಾರಂಭಿಸಿ ಜು.03 ಮತ್ತು ಜು.04ರಂದು ಬೆಳಿಗ್ಗೆ 08 ಗಂಟೆಯಿಂದ ಪ್ರತಿ ಗ್ರಾಮ ಪಂಚಾಯತಿಯಲ್ಲಿ ವಿಶೇಷ ಅಭಿಯಾನ ರೂಪದಲ್ಲಿ ಖುದ್ದಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಜಿಪಿಎಸ್ ಮುಖಾಂತರ ಮನೆಗಳನ್ನು ಅಳವಡಿಸಲು ಕ್ರಮ ವಹಿಸುವಂತೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ

ಮೊದಲ ಪುಟದಿಂದ

ಅರ್ಜಿ ಸಲ್ಲಿಸಲು ಜುಲೈ 20 ಕೊನೆಯ ದಿನಾಂಕವಾಗಿದ್ದು, ಪ್ರವರ್ಗ-1, ಎಸ್.ಸಿ. & ಎಸ್.ಟಿ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ರೂ. 2.50ಲಕ್ಷ ಮತ್ತು ಪ್ರವರ್ಗ-2ಎ, 2ಬಿ, 3ಎ, 3ಬಿ ಇತರೆ ಹಿಂದುಳಿದ ವರ್ಗ ಹಾಗೂ ಇತರೆ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ 1 ಲಕ್ಷ ರೂ. ಒಳಗಿರಬೇಕು.

ಅರ್ಜಿಯನ್ನು ಇಲಾಖೆಯ ವೆಬ್‌ಸೈಟ್ https://shp.karnataka.gov.in/bcwd ನಲ್ಲಿ ಸಲ್ಲಿಸಬೇಕು. ತಾಲೂಕುವಾರು ವಿದ್ಯಾರ್ಥಿನಿಲಯದ ವಿವರ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ www.bcwd.karnataka.gov.in ನ್ನು ನೋಡಬಹುದು. ಹೆಚ್ಚಿನ ಮಾಹಿತಿಗಾಗಿ ಕೂಡ್ಲಿಗಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಕೂಡ್ಲಿಗಿ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

# ಬೆಳೆ ವಿಮೆ ಯೋಜನೆ ನೋಂದಣಿಗೆ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**

ಸಿರುಗುಪ್ಪ ವ್ಯಾಪ್ತಿಯಲ್ಲಿ ಪ್ರಸ್ತಕ ಸಾಲಿಗೆ ಮುಂಗಾರು ಹಂಗಾಮು ಅವಧಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಬೆಳೆ ವಿಮೆ ಯೋಜನೆ (ಕೆಆರ್‌ಎಸ್-ಪಿಎಂಎಫ್‌ಬಿವೈ) ಗೆ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅರ್ಹ ರೈತರು ತಮ್ಮ ಬೆಳೆಗಳನ್ನು ವಿಮೆಗೆ ನೋಂದಾಯಿಸಿಕೊಳ್ಳಬೇಕು ಎಂದು ಸಿರುಗುಪ್ಪದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ಪ್ರಕೃತಿ ವಿಕೋಪಗಳು, ಹವಾಮಾನ ವೈಪರೀತ್ಯಗಳಾದ ಆಲಿಕಲ್ಲು ಮಳೆ, ಪ್ರವಾಹ ಮತ್ತು ಇತ್ಯಾದಿ ಕಾರಣಗಳಿಂದ ಸಂಭವಿಸಬಹುದಾದ ಬೆಳೆಹಾನಿಯ ನಷ್ಟದ ಪರಿಹಾರವನ್ನು ಬೆಳೆ ವಿಮೆ ಘಟಕವಾರು ನಿರ್ಧರಿಸಿ ಬೆಳೆ ನಷ್ಟದ ಪರಿಹಾರ ನೀಡಲಾಗುವುದು.

ವಿಮಾ ಯೋಜನೆಯಡಿ ಒಳಪಡುವ **ನೀರಾವರಿ ಬೆಳೆ:** ಕೆಂಪು ಮೆಣಸಿನಕಾಯಿ ಆಗಿದ್ದು, ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ ರೂ.43,505, ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ರೂ.2,175 ಆಗಿರುತ್ತದೆ.

ಪಿಎಂಎಫ್‌ಬಿವೈ (ಪರಿಷ್ಕೃತ) ಮಾರ್ಗ ಸೂಚಿಯನ್ವಯ ಬ್ಯಾಂಕಿನಲ್ಲಿ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಡಿ ಒಳಪಡಿಸಲಾಗುತ್ತದೆ. ಬೆಳೆ ಸಾಲ ಪಡೆದ ರೈತರು ಈ ಯೋಜನೆಯಡಿ ಭಾಗವಹಿಸಲು ಇಚ್ಛಿಸ ದಿದ್ದಲ್ಲಿ ಈ ಕುರಿತು ಬ್ಯಾಂಕಿನ ವ್ಯವ ಸ್ಥಾಪಕರಿಗೆ ಬೆಳೆ ನೋಂದಣಿಯ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರ ನೀಡಬೇಕು. ಅಂತಹ ರೈತರನ್ನು ಬೆಳೆ ವಿಮೆ ನೋಂದಣಿ ಯೋಜನೆಯಿಂದ ಕೈಬಿಡ ಲಾಗುವುದು.

ರೈತರು ಅಗತ್ಯ ದಾಖಲೆಗಳೊಂದಿಗೆ ವಿಮೆಗೆ ನೋಂದಾಯಿಸಿಕೊಳ್ಳಲು ಜುಲೈ 31 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಿರುಗುಪ್ಪದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ. 08396-222066 ಗೆ ಸಂಪರ್ಕಿಸಿ.

# ಮೀನುಗಾರಿಕೆ ಇಲಾಖೆಯಿಂದ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**

ಮೀನುಗಾರಿಕೆ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ರಾಜ್ಯವಲಯ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ರಾಜ್ಯವಲಯ ಯೋಜನೆಗಳು:** ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ ಯೋಜನೆಯಡಿ ಸಹಾಯಧನ ನೆರವು, ಮೀನುಮರಿ ಖರೀದಿಸಲು ನೆರವು ಯೋಜನೆ, ಕೆರೆ, ಜಲಾಶಯಗಳ ಅಂಚಿನ ಕೊಳೆಗಳಲ್ಲಿ ಮೀನುಮರಿ ಪಾಲನೆಗೆ ಸಹಾಯಧನ ನೆರವು ನೀಡಲಾಗುವುದು.

ಅರ್ಹ ಫಲಾನುಭವಿಗಳು ಅಗತ್ಯ ದಾಖಲೆಗಳೊಂದಿಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನಾವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ, ಸಿರುಗುಪ್ಪ, ಕಂಪ್ಲಿ ಮತ್ತು ಕುರುಗೋಡು ತಾಲ್ಲೂಕು ವ್ಯಾಪ್ತಿಗೆ ವಿಶ್ವನಾಥಯ್ಯ- ಮೊ. 9740162401 ಮತ್ತು ಸಂಡೂರು ವ್ಯಾಪ್ತಿಗೆ ಜಿ.ಶಾಂತಕುಮಾರ್-ಮೊ. 9620177588 ಇವರನ್ನು ಸಂಪರ್ಕಿಸ ಬಹುದು ಎಂದು ಮೀನು ಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.




Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA